# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಎತ್ತಿನಹೊಳೆ ಯೋಜನೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ವಿಶೇಷ ಜಿಲ್ಲಾಧಿಕಾರಿ / ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿಗಳನ್ನು ಸ್ಥಳಾಂತರಿಸುವ ಬಗ್ಗೆ - ಆದೇಶ.

* * * *

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಜಸಂಇ 324 ಸೇಎಸು 2014, ದಿನಾಂಕ: 29/12/2014.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿನಿ/ಸಿ-8/19/ಎಜಿಎನ್/2013-14/4885, ದಿನಾಂಕ: 31/12/2014.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ: 29/12/2014ರಲ್ಲಿ, ಎತ್ತಿನಹೊಳೆ ಯೋಜನೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯನ್ನು ಅನುಷ್ಠಾನಗೊಳಿಸುವ ಸಲುವಾಗಿ, ಕೆಳಕಂಡ ವಿಶೇಷ ಜಿಲ್ಲಾಧಿಕಾರಿ/ವಿಶೇಷ ಭೂಸ್ವಾಧೀನಾಧಿಕಾರಿಗಳ ಕಛೇರಿಗಳನ್ನು ಕೆಳಕಂಡಂತೆ ಎನ್-ಬ್ಲಾಕ್ ಆಗಿ ಸ್ಥಳಾಂತರಿಸಿ, ಕಛೇರಿಗಳನ್ನು ಪ್ರಾರಂಭಿಸಲು ಆದೇಶಿಸಲಾಗಿದೆ :

1) ವಿಶೇಷ ಜಿಲ್ಲಾಧಿಕಾರಿಗಳು, ಹಿಪ್ಪರಗಿ ಯೋಜನೆ, ಅಥಣಿ, ಕಛೇರಿಯ ಕಾರ್ಯಭಾರವನ್ನು ವಿಶೇಷ ಜಿಲ್ಲಾಧಿಕಾರಿಗಳ ಕಚೇರಿ, ಬೃಹತ್ ಯೋಜನೆಗಳು (ಘಟಪ್ರಭಾ ಮತ್ತು ಮಲಪ್ರಭಾ ಯೋಜನೆಗಳು), ಬೆಳಗಾವಿ ಇವರಿಗೆ ಹಸ್ತಾಂತರಿಸಿ, ಈ ಕಚೇರಿಯನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳ (ಭೂಸ್ವಾಧೀನ) ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ ಇಲ್ಲಿ ಪ್ರಾರಂಭಿಸುವುದು.

2) ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ, ಕಚೇರಿಯ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ತುಂಗಾ ಮೇಲ್ದಂಡೆ ಯೋಜನೆ, ರಾಣೆಬೆನ್ನೂರು ಇವರಿಗೆ ಹಸ್ತಾಂತರಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಛೇರಿ ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ, ಇಲ್ಲಿ ಪ್ರಾರಂಭಿಸುವುದು.

3) ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹೇಮಾವತಿ ಜಲಾಶಯ ಯೋಜನೆ, ಹಾಸನ, ಕಾರ್ಯಭಾರವನ್ನು ಉಪವಿಭಾಗಾಧಿಕಾರಿಗಳು, ಹಾಸನ ಜಿಲ್ಲಾ ಉಪವಿಭಾಗ, ಹಾಸನ, ಇವರಿಗೆ ವಿಲೀನಗೊಳಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಎತ್ತಿನಹೊಳೆ ಯೋಜನೆ, ಸಕಲೇಶಪುರ, ಇಲ್ಲಿ ಪ್ರಾರಂಭಿಸುವುದು.

ವ್ಯವಸ್ಥಾಪಕ ನಿರ್ದೇಶಕರು
ಕನೀನಿನಿ ಕೇಂದ್ರ ಕಛೇರಿ, ...
ಮು.ಆ.ಸಂ.:
ನಿಬಂಧನೆ: 6
ಅಧೀಕ್ಷಕ:
ದಿನಾಂಕ:
ಶಾಖೆ: C.8

...2/-

1221 10/2/15

SLO 3/2/2015 — Tumkur office ...
Sakaleshpur office ...
23/1/2015

4) ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹಿಪ್ಪರಗಿ ಯೋಜನೆ (ಪುನರ್ವಸತಿ ಮತ್ತು ಪುನರ್‌ನಿರ್ಮಾಣ), ಅಥಣಿ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ಹಿಪ್ಪರಗಿ ಯೋಜನೆ, ಅಥಣಿ, ಕಚೇರಿಗೆ ವಿಲೀನಗೊಳಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಎತ್ತಿನಹೊಳೆ ಯೋಜನೆ, ತುಮಕೂರು, ಇಲ್ಲಿ ಪ್ರಾರಂಭಿಸುವುದು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 31/12/2014ರಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ದಿನಾಂಕ: 29/12/2014ರ ಆದೇಶದಲ್ಲಿ, ಎತ್ತಿನಹೊಳೆ ಯೋಜನೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ವಿಶೇಷ ಜಿಲ್ಲಾಧಿಕಾರಿ / ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿಗಳನ್ನು ಸ್ಥಳಾಂತರಿಸಿರುವ ಕಛೇರಿಗಳ ಕಾರ್ಯವ್ಯಾಪ್ತಿಯನ್ನು ನಿಗಧಿಪಡಿಸುವಂತೆ ಕೋರಿರುತ್ತಾರೆ. ಅದರಂತೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 324 ಸೇಎಸು 2014, ಬೆಂಗಳೂರು, ದಿನಾಂಕ: 03/02/2015**

ಎತ್ತಿನಹೊಳೆ ಯೋಜನೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ವಿಶೇಷ ಜಿಲ್ಲಾಧಿಕಾರಿ / ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿಗಳನ್ನು ಸ್ಥಳಾಂತರಿಸಿರುವ ಕಛೇರಿಗಳ ಕಾರ್ಯವ್ಯಾಪ್ತಿಯನ್ನು ಈ ಕೆಳಗಿನಂತೆ ನಿಗಧಿಪಡಿಸಿ ಆದೇಶಿಸಲಾಗಿದೆ :

| ಕ್ರ. ಸಂ. | ಸರ್ಕಾರದ ದಿನಾಂಕ: 29/12/2014ರ ಆದೇಶದಲ್ಲಿರುವ ಕಛೇರಿಗಳ ವಿವರ | ಸದರಿ ಕಛೇರಿಗಳನ್ನು ನಿಗಧಿಪಡಿಸಿರುವ ಕಾರ್ಯವ್ಯಾಪ್ತಿಯ ವಿವರ |
|---|---|---|
| 1. | ವಿಶೇಷ ಜಿಲ್ಲಾಧಿಕಾರಿಗಳು, ಹಿಪ್ಪರಗಿ ಯೋಜನೆ, ಅಥಣಿ, ಕಛೇರಿಯ ಕಾರ್ಯಭಾರವನ್ನು ವಿಶೇಷ ಜಿಲ್ಲಾಧಿಕಾರಿಗಳ ಕಚೇರಿ, ಬೃಹತ್ ಯೋಜನೆಗಳು (ಘಟಪ್ರಭಾ ಮತ್ತು ಮಲಪ್ರಭಾ ಯೋಜನೆಗಳು), ಬೆಳಗಾವಿ, ಇವರಿಗೆ ಹಸ್ತಾಂತರಿಸಿ, ಈ ಕಚೇರಿಯನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳ (ಭೂಸ್ವಾಧೀನ) ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ ಇಲ್ಲಿ ಪ್ರಾರಂಭಿಸುವುದು. | ವಿಶೇಷ ಜಿಲ್ಲಾಧಿಕಾರಿಗಳು, ಹಿಪ್ಪರಗಿ ಯೋಜನೆ, ಅಥಣಿ, ಕಛೇರಿಯ ಕಾರ್ಯಭಾರವನ್ನು ವಿಶೇಷ ಜಿಲ್ಲಾಧಿಕಾರಿಗಳ ಕಚೇರಿ, ಬೃಹತ್ ಯೋಜನೆಗಳು (ಘಟಪ್ರಭಾ ಮತ್ತು ಮಲಪ್ರಭಾ ಯೋಜನೆಗಳು), ಬೆಳಗಾವಿ, ಇವರಿಗೆ ಹಸ್ತಾಂತರಿಸಿ, ಈ ಕಚೇರಿಯನ್ನು ಚಿತ್ರದುರ್ಗಕ್ಕೆ ವರ್ಗಾಯಿಸಿ, ವಿಶೇಷ ಜಿಲ್ಲಾಧಿಕಾರಿ ಕಛೇರಿ (ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಭದ್ರಾ ಮೇಲ್ದಂಡೆ ಯೋಜನೆ, ತುಂಗಾ ಮೇಲ್ದಂಡೆ ಯೋಜನೆ ಮತ್ತು ಎತ್ತಿನಹೊಳೆ ಯೋಜನೆ, ಚಿತ್ರದುರ್ಗ, ಎಂಬ ನಾಮಾಂಕಿತದೊಂದಿಗೆ ಪ್ರಾರಂಭಿಸುವುದು. ಈ ಕಛೇರಿಯು ಮೇಲ್ಕಂಡ ಮೂರು ಯೋಜನೆಗಳ ವ್ಯಾಪ್ತಿಯನ್ನು ಹೊಂದಿರುವುದು.. |
| 2. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ, ಕಚೇರಿಯ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ತುಂಗಾ ಮೇಲ್ದಂಡೆ ಯೋಜನೆ, ರಾಣೆಬೆನ್ನೂರು ಇವರಿಗೆ ಹಸ್ತಾಂತರಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಛೇರಿ ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ, ಇಲ್ಲಿ ಪ್ರಾರಂಭಿಸುವುದು. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ, ಕಚೇರಿಯ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ತುಂಗಾ ಮೇಲ್ದಂಡೆ ಯೋಜನೆ, ರಾಣೆಬೆನ್ನೂರು ಇವರಿಗೆ ಹಸ್ತಾಂತರಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಛೇರಿ, ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ, ಇಲ್ಲಿ ಪ್ರಾರಂಭಿಸುವುದು. ಈ ಕಛೇರಿಯು ಚಿತ್ರದುರ್ಗ, ದಾವಣಗೆರೆ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಯನ್ನು ಹೊಂದಿರುವುದು. |

| | | |
|---|---|---|
| 3. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹೇಮಾವತಿ ಜಲಾಶಯ ಯೋಜನೆ, ಹಾಸನ, ಕಾರ್ಯಭಾರವನ್ನು ಉಪ ವಿಭಾಗಾಧಿಕಾರಿಗಳು, ಹಾಸನ ಜಿಲ್ಲಾ ಉಪವಿಭಾಗ, ಹಾಸನ, ಇವರಿಗೆ ವಿಲೀನಗೊಳಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ [illegible] ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಎತ್ತಿನಹೊಳೆ ಯೋಜನೆ, ಸಕಲೇಶಪುರ, ಇಲ್ಲಿ ಪ್ರಾರಂಭಿಸುವುದು. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹೇಮಾವತಿ ಜಲಾಶಯ ಯೋಜನೆ, ಹಾಸನ, ಕಾರ್ಯಭಾರವನ್ನು ಉಪವಿಭಾಗಾಧಿಕಾರಿಗಳು, ಹಾಸನ ಉಪವಿಭಾಗ, ಹಾಸನ, ಇವರಿಗೆ ವಿಲೀನಗೊಳಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಚೇರಿ, ಎತ್ತಿನಹೊಳೆ ಯೋಜನೆ, ಸಕಲೇಶಪುರ, ಇಲ್ಲಿ [illegible] ಪ್ರಾರಂಭಿಸುವುದು. ಈ ಕಛೇರಿಯು ಹಾಸನ ಜಿಲ್ಲೆಯ ಕಾರ್ಯವ್ಯಾಪ್ತಿಯನ್ನು ಹೊಂದಿರುವುದು. |
| 4. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹಿಪ್ಪರಗಿ ಯೋಜನೆ (ಪುನರ್ವಸತಿ ಮತ್ತು ಪುನರ್‌ನಿರ್ಮಾಣ), ಅಥಣಿ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ಹಿಪ್ಪರಗಿ ಯೋಜನೆ, ಅಥಣಿ, ಕಚೇರಿಗೆ ವಿಲೀನ ಗೊಳಿಸಿ, ವಿಶೇಷ ಭೂಸ್ವಾಧೀನಾಧಿ ಕಾರಿಗಳ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಎತ್ತಿನಹೊಳೆ ಯೋಜನೆ, ತುಮಕೂರು, ಇಲ್ಲಿ ಪ್ರಾರಂಭಿಸುವುದು. | ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಹಿಪ್ಪರಗಿ ಯೋಜನೆ (ಪುನರ್ವಸತಿ ಮತ್ತು ಪುನರ್ ನಿರ್ಮಾಣ), ಅಥಣಿ ಕಾರ್ಯಭಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿ ಕಛೇರಿ, ಹಿಪ್ಪರಗಿ ಯೋಜನೆ, ಅಥಣಿ, ಕಚೇರಿಗೆ ವಿಲೀನಗೊಳಿಸಿ, ವಿಶೇಷ ಭೂಸ್ವಾಧೀನಾಧಿಕಾರಿಗಳ ಕಚೇರಿ, ಎತ್ತಿನಹೊಳೆ ಯೋಜನೆ ಎಂದು ತುಮಕೂರು ಕೇಂದ್ರಸ್ಥಾನವನ್ನಾಗಿ ಪ್ರಾರಂಭಿಸುವುದು. ಈ ಕಛೇರಿಯು ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕಾರ್ಯವ್ಯಾಪ್ತಿಯನ್ನು ಹೊಂದಿರುವುದು. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ವಿಶ್ವನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು-೬).

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2) ಪ್ರಧಾನ ಮಹಾಲೇಖಪಾಲರು (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ, ಬೆಂಗಳೂರು.
4) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಧಾರವಾಡ/ ಬೆಂಗಳೂರು

[illegible]